ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 324
2. ಸದಸ್ಯರ ಹೆಸರು : ಶ್ರೀ ಅ.ದೇವೇಗೌಡ (ಪದವೀಧರ ಕ್ಷೇತ್ರ)
3. ಉತ್ತರಿಸುವ ದಿನಾಂಕ : 12.7.2018
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿಯವರು

| ಪ್ರಶ್ನೆ | ಉತ್ತರ |
|---|---|
| ಅ) ರಾಜ್ಯದ ದಿನಗೂಲಿ ನೌಕರರು ಕಳೆದ 30 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರಿ ಆದೇಶಾನುಸಾರ ಪ್ರಸ್ತುತ ಮಾಹೆಯಾನ ಸರಾಸರಿ 18,000.00 ಗಳಿದ್ದು, ಈ ವೇತನದಿಂದ ಜೀವನ ನಿರ್ವಹಣೆ ಮಾಡುವುದು ಅಸಾಧ್ಯವಾಗಿದ್ದು ತುಟ್ಟಿಭತ್ಯೆ ಮತ್ತು ಮನೆ ಬಾಡಿಗೆ ಭತ್ಯೆಯನ್ನು ಕನಿಷ್ಠ ಶೇಕಡ 85ಕ್ಕೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದೇ: | ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿಗೆ ಮತ್ತು ಸೇವಾವಧಿಯ ಕನಿಷ್ಠ ಭದ್ರತೆ, ಉತ್ತಮ ವೇತನ ಹಾಗೂ ಕೆಲವು ಸಾಮಾಜಿಕ ಭದ್ರತೆಯನ್ನು ಕಲ್ಪಿಸಲು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ನ್ನು ಜಾರಿಗೆ ತರಲಾಗಿದೆ. ಈ ಅಧಿನಿಯಮವನ್ನು ಜಾರಿಗೊಳಿಸುವ ಉದ್ದೇಶದಿಂದ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು, 2013ನ್ನು ಜಾರಿಗೆ ತರಲಾಗಿದೆ. ಈ ಅಧಿನಿಯಮ ಮತ್ತು ನಿಯಮಗಳನ್ವಯ ಅಧಿಸೂಚಿಸಲ್ಪಟ್ಟ ದಿನಗೂಲಿ ನೌಕರರಿಗೆ ಈ ನೌಕರರ ಪ್ರವರ್ಗವನ್ನು ಗಮನದಲ್ಲಿರಿಸಿ, ಅವರನ್ನು ಸೇವೆಯಲ್ಲಿ ಮುಂದುವರೆಸಿದ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನ, ರಾಜ್ಯ ಸರ್ಕಾರಿ ನೌಕರರಿಗೆ ಕಾಲಕಾಲಕ್ಕೆ ನೀಡಲಾಗುವ ತುಟ್ಟಿಭತ್ಯೆಯ ಶೇ.75ರಷ್ಟು ಮತ್ತು ಮನೆ ಬಾಡಿಗೆ ಭತ್ಯೆಯ ಸಾಮಾನ್ಯ ದರಗಳ ಶೇ.75 ರಷ್ಟನ್ನು ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ತುಟ್ಟಿಭತ್ಯೆ ಮತ್ತು ಮನೆಬಾಡಿಗೆ ಭತ್ಯೆಯನ್ನು ಶೇಕಡ 85ಕ್ಕೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಆ) ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು, 2013 ನಿಯಮ 4(4) ರನ್ವಯ ಪಿಂಚಣಿ ಯೋಜನೆಯನ್ನು ಈಗಲಾದರು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ ? | ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳು, 2013ರನ್ವಯ ದಿನಗೂಲಿ ನೌಕರರಿಗೆ ಎನ್.ಪಿ.ಎಸ್. ಸ್ವಾವಲಂಬನ್ ಯೋಜನೆಯನ್ನು ಜಾರಿಗೊಳಿಸಬೇಕಾಗಿದ್ದು, ಈ ಯೋಜನೆಯನ್ನು ಭಾರತ ಸರ್ಕಾರವು ಆರ್ಥಿಕ ವರ್ಷ 2015-16ರಿಂದ ಸ್ಥಗಿತಗೊಳಿಸಿದೆ. ಆದ್ದರಿಂದ, ಈ ಯೋಜನೆಯನ್ನು ಜಾರಿಗೊಳಿಸಲು ಸಾಧ್ಯವಾಗಿರುವುದಿಲ್ಲ. |
| ಇ) ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿಸೂಚನೆ ದಿನಾಂಕ: 15.2.2013 ರಂದು ರಾಜ್ಯಪಾಲರು ಸಹಿ ಮಾಡಿ ಅದೇ ದಿನಾಂಕದಿಂದ ಜಾರಿಗೊಳಿಸಬೇಕಾಗಿದ್ದು, ದಿನಾಂಕ: 19.9.2014ರಲ್ಲಿ ಹೊರಡಿಸಿದ ಆದೇಶಾನುಸಾರ ಆಯಾ ಇಲಾಖೆಯ ನೌಕರರನ್ನು ಅಧಿಸೂಚಿಸಿದ ದಿನಾಂಕದಿಂದ ಸೇವಾ ಸೌಲಭ್ಯಗಳನ್ನು ನೀಡಲು ಆದೇಶಿಸಿದ್ದು, ಇದರಿಂದ ಬೇರೆ ಬೇರೆ ಇಲಾಖೆಯ ನೌಕರರುಗಳು ಸೇವಾ ಸೌಲಭ್ಯದಿಂದ ವಂಚಿತರಾಗಿದ್ದು, ದಿನಾಂಕ: 15.2.2013ರಿಂದಲೇ ಸೇವಾ ಸೌಲಭ್ಯಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುವುದೇ: | ದಿನಗೂಲಿ ನೌಕರರಿಗೆ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ ಜಾರಿಗೆ ಬಂದ ದಿನಾಂಕದಿಂದ ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ ಸರ್ಕಾರವು ನಿರ್ಧಾರ ಕೈಗೊಂಡಿರುವುದಿಲ್ಲ. |

| | |
|---|---|
| ಈ) 30 ವರ್ಷಗಳಿಂದ ಅರ್ಧ ವೇತನಕ್ಕೆ ದಿನಗೂಲಿಯಲ್ಲಿ ಕಾರ್ಯನಿರ್ವಹಿಸಿ ಪ್ರಸ್ತುತ ಅನಾರೋಗ್ಯದಿಂದ ಬಳಲುತ್ತಿರುವವರಿಗೆ ಮತ್ತು ಇವರ ಕುಟುಂಬಕ್ಕೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ನೀಡಲು ಕ್ರಮ ಕೈಗೊಳ್ಳಲಾಗುವುದೇ; | ಇಲ್ಲ.<br>ದಿನಗೂಲಿ ನೌಕರರು ಸಂವಿಧಾನಾತ್ಮಕವಾಗಿ ರಚಿಸಿದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇಮಕಾತಿ ಹೊಂದಿದ ನೌಕರರಲ್ಲ. ಜ್ಯೋತಿ ಸಂಜೀವಿನಿ ಯೋಜನೆಯು ಸರ್ಕಾರಿ ನೌಕರರಿಗೆ ಮಾತ್ರ ವಿಸ್ತರಿಸಿರುವ ಯೋಜನೆಯಾಗಿದೆ. |
| ಉ) ಪರಿಷ್ಕೃತ ವೇತನ ಶ್ರೇಣಿಯನ್ನು ದಿನಗೂಲಿ ನೌಕರರಿಗೆ ವಿಸ್ತರಿಸಲು ಆದೇಶ ಹೊರಡಿಸಲಾಗುವುದೇ? | ಪರಿಷ್ಕೃತ ವೇತನ ಶ್ರೇಣಿಯನ್ನು ದಿನಗೂಲಿ ನೌಕರರಿಗೆ ವಿಸ್ತರಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಸಿಆಸುಇ 51 ಸೇಸ್ಥಅ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ.